# ರಾಣಿ ಚನ್ನಮ್ಮ ವಿಶ್ವವಿದ್ಯಾಲಯ

ವಿದ್ಯಾಸಂಗಮ, ರಾಷ್ಟ್ರೀಯ ಹೆದ್ದಾರಿ – 04, ಭೂತರಾಮನಹಟ್ಟಿ, ಬೆಳಗಾವಿ – 591156

# RANI CHANNAMMA UNIVERSITY

**Vidyasangama, National Highway – 04, Bhootaramanahatti, Belagavi – 591156**

E-mail: rcubacademic2010@gmail.com
rcuregistrar@gmail.com

ಕುಲಸಚಿವರ ಕಾರ್ಯಾಲಯ
Office of the Registrar

Website: www.rcub.ac.in
Phone No.: 0831-2565257/34


ಕ್ರಸಂ.: ರಾಚವಿ/ಬೆಳಗಾವಿ/2021–22/525

ದಿನಾಂಕ:20–05–2021.

## ಸುತ್ತೋಲೆ

ವಿಷಯ: ರಾಜ್ಯದಲ್ಲಿ ಸಮಗ್ರ ವಿಶ್ವವಿದ್ಯಾಲಯ ಮತ್ತು ಕಾಲೇಜು ನಿರ್ವಹಣಾ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಲು (UUCMS) ತಮ್ಮ ಮಹಾವಿದ್ಯಾಲಯದಲ್ಲಿ ಇ–ಆಡಳಿತ ಘಟಕವನ್ನು ರಚಿಸುವ ಕುರಿತು.

ಉಲ್ಲೇಖ: 1. ಸರ್ಕಾರಿ ಆದೇಶ ಸಂಖ್ಯೆ: ಇಡಿ 35 ಇಜಿಒವಿ2020, ಬೆಂಗಳೂರು, ದಿ:04–08–2020
2. ಸರ್ಕಾರಿ ಆದೇಶ ಸಂಖ್ಯೆ: ಇಡಿ 35 ಇಜಿಒವಿ2020, ಬೆಂಗಳೂರು, ದಿ:23–11–2020.
3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:20–05–2021.

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಗಳನ್ವಯ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಎಲ್ಲ ಸಂಯೋಜಿತ ಮಹಾವಿದ್ಯಾಲಯಗಳ ಪ್ರಾಂಶುಪಾಲರಿಗೆ ಈ ಮೂಲಕ ತಿಳಿಸುವುದೇನೆಂದರೆ, ಕರ್ನಾಟಕ ಸರ್ಕಾರ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರು ರಾಜ್ಯದ ಉನ್ನತ ಶಿಕ್ಷಣ ವಲಯದ ಶೈಕ್ಷಣಿಕ ಮತ್ತು ಆಡಳಿತ ವಿಭಾಗಗಳಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಮಾಹಿತಿ ತಂತ್ರಜ್ಞಾನವನ್ನು ಉನ್ನತೀಕರಿಸಿ, ಪಾರದರ್ಶಕ ಆಡಳಿತ ಮತ್ತು ಗುಣಾತ್ಮಕ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸುವ ಉದ್ದೇಶಕ್ಕಾಗಿ ಸಮಗ್ರ ವಿಶ್ವವಿದ್ಯಾಲಯ ಮತ್ತು ಕಾಲೇಜುಗಳ ನಿರ್ವಹಣಾ ವ್ಯವಸ್ಥೆಯನ್ನು ಅನುಷ್ಠಾನಗೊಳಿಸುವುದಕ್ಕಾಗಿ (Unified University & College Management System-UUCMS) ಉಲ್ಲೇಖಿತ ಸರ್ಕಾರದ ಆದೇಶದನ್ವಯ ವಿಶ್ವವಿದ್ಯಾಲಯದ ಎಲ್ಲ ಸಂಯೋಜಿತ ಮಹಾವಿದ್ಯಾಲಯಗಳಲ್ಲಿ ಇ–ಆಡಳಿತ ಘಟಕವನ್ನು (e-governance Unit) ರಚಿಸಲು ತಿಳಿಸಿರುತ್ತಾರೆ. ಸದರಿ, ಇ–ಆಡಳಿತ ಘಟಕದಲ್ಲಿ ಮಾಹಿತಿ ತಂತ್ರಜ್ಞಾನದ ಪರಿಣಿತ ಅಧ್ಯಾಪಕರೊಬ್ಬರನ್ನು ಹೆಚ್ಚುವರಿ ಕಾರ್ಯದೊಂದಿಗೆ ಘಟಕದ ನೋಡಲ್ ಅಧಿಕಾರಿಯನ್ನಾಗಿ (e-governance Nodal Officer) ಹಾಗೂ ದ್ವಿತೀಯ ದರ್ಜೆ ಸಹಾಯಕ ಸಮಾನಾಂತರ ಅಥವಾ ಉನ್ನತ ಹುದ್ದೆಯ ಬೋಧಕೇತರ ಸಿಬ್ಬಂದಿಯನ್ನು ಮಾಹಿತಿ ತಂತ್ರಜ್ಞಾನ ನಿರ್ವಾಹಕರನ್ನಾಗಿ ಹೆಚ್ಚುವರಿ ಕಾರ್ಯ ನಿರ್ವಹಿಸಲು ನೇಮಿಸಿಕೊಳ್ಳಬೇಕೆಂದು ತಿಳಿಸಿದ್ದರಿಂದ, ತಾವು ಸದರಿ ಯೋಜನೆ ಅನುಷ್ಠಾನಕ್ಕಾಗಿ ಇ–ಆಡಳಿತ ಘಟಕವನ್ನು ಮೇಲೆ ತಿಳಿಸಿರುವಂತೆ ಪರಿಣಿತರನ್ನು ನೇಮಿಸಿ ಸದರಿಯವರಿಗೆ ನೀಡಿರುವ ನೇಮಕಾತಿ ಕಛೇರಿ ಆದೇಶ ಹಾಗೂ ಅವರುಗಳ ವಿವರವನ್ನು ತಮಗೆ ನೀಡಲಾದ Google Form ನಲ್ಲಿ ಸದರಿ ದಿನಾಂಕ:28–05–2021 ರ ಒಳಗಾಗಿ ಭರ್ತಿಮಾಡಿ ಸಲ್ಲಿಸಲು ತಮಗೆ ಈ ಮೂಲಕ ತಿಳಿಸಲಾಗಿದೆ.

ಕುಲಸಚಿವರು

ಕುಲಸಚಿವರು
ರಾಣಿ ಚನ್ನಮ್ಮ ವಿಶ್ವವಿದ್ಯಾಲಯ
ವಿದ್ಯಾಸಂಗಮ
ಬೆಳಗಾವಿ-591156, ಕರ್ನಾಟಕ

ಇವರಿಗೆ,

1. ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಒಳಪಡುವ ಬೆಳಗಾವಿ, ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳ ಎಲ್ಲ ಸಂಯೋಜಿತ ಮಹಾವಿದ್ಯಾಲಯದ ಪ್ರಾಂಶುಪಾಲರುಗಳಿಗೆ.

ಪ್ರತಿ ಮಾಹಿತಿಗಾಗಿ:

1. ಕುಲಸಚಿವರು(ಮೌ), ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
2. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
3. ಉಪಕುಲಸಚಿವರು/ಸಹಾಯಕ ಕುಲಸಚಿವರು, ವಿದ್ಯಾಮಂಡಳ, ವಿಭಾಗ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
4. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ಕುಲಪತಿಗಳ ಸಚಿವಾಲಯ, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.

ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಕುಲಸಚಿವರ ಕಾರ್ಯಾಲಯ * ಬೆಳಗಾವಿ *